Akashvani : Bangalore
National Bulletin In Kannada
27.07.2024 / 9.05AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
27.07.2024 / 9.05AM
*******

ಮುಖ್ಯಾಂಶಗಳು:

1. ಪ್ಯಾರಿಸ್ ಒಲಿಂಪಿಕ್ಸ್‌ಗೆ ವರ್ಣರಂಜಿತ ಚಾಲನೆ; ಮಳೆಯ ಸಿಂಚನದ ನಡುವೆಯೇ ಭವ್ಯ ಉದ್ಘಾಟನಾ ಸಮಾರಂಭ; ತ್ರಿವರ್ಣ ಧ್ವಜದೊಂದಿಗೆ ಭಾರತ ತಂಡವನ್ನು ಮುನ್ನಡೆಸಿದ ಪಿ.ವಿ. ಸಿಂಧು - ಶರತ್ ಕಮಲ್
2. ನವದೆಹಲಿಯಲ್ಲಿಂದು ನೀತಿ ಆಯೋಗದ ಆಡಳಿತ ಮಂಡಳಿಯ ೯ನೇ ಸಭೆ; ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆ
3. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ವಿಯೆಂಟಿನಾ ಪ್ರವಾಸ; ವಿವಿಧ ದೇಶಗಳ ತಮ್ಮ ಸಹವರ್ತಿಗಳೊಂದಿಗೆ ದ್ವಿಪಕ್ಷೀಯ ಬಾಂಧವ್ಯ ವೃದ್ಧಿಯ ಕುರಿತು ಚರ್ಚೆ
4. ಭಾರತ - ಅಮೆರಿಕ ನಡುವೆ ಸಾಂಸ್ಕೃತಿಕ ಆಸ್ತಿ ಒಪ್ಪಂದಕ್ಕೆ ಸಹಿ; ಅಕ್ರಮ ವ್ಯಾಪಾರ ಮತ್ತು ಕಳ್ಳ ಸಾಗಾಣಿಕೆ ನಿಯಂತ್ರಣಕ್ಕೆ ಕ್ರಮ

******

ಫ್ರಾನ್ಸ್ ರಾಜಧಾನಿ ಪ್ಯಾರಿಸ್‌ನಲ್ಲಿ ಮಧ್ಯರಾತ್ರಿ ೨೦೨೪ರ ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟಕ್ಕೆ ವರ್ಣರಂಜಿತ ಚಾಲನೆ ದೊರೆಯಿತು. ಧಾರಾಕಾರವಾಗಿ ಸುರಿಯುತ್ತಿದ್ದ ಮಳೆ ನಡುವೆಯೇ ಉದ್ಘಾಟನಾ ಸಮಾರಂಭ ಪ್ರಾರಂಭವಾಯಿತು. ಸೆನ್ ನದಿಯ ಮೇಲೆ ನಡೆದ ಆತ್ಯಾಕರ್ಷಕ ಉದ್ಘಾಟನಾ ಸಮಾರಂಭದಲ್ಲಿ ಫ್ರಾನ್ಸ್ ಅಧ್ಯಕ್ಷ ಇಮ್ಯಾನುಯಲ್ ಮ್ಯಾಕ್ರಾನ್ ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟ ಆರಂಭದ ಘೋಷಣೆ ಮಾಡಿದರು. ಸುಮಾರು ೭ ಸಾವಿರ ಅಥ್ಲೀಟ್‌ಗಳು ಸೆನ್ ನದಿಯಲ್ಲಿ ಪ್ರತ್ಯೇಕವಾಗಿ ತಮ್ಮ ತಮ್ಮ ದೇಶಗಳ ತಂಡದ ಜತೆ, ದೋಣಿಯ ಮೂಲಕ ಪಥಸಂಚಲನದಲ್ಲಿ ಸಾಗಿಬಂದರು. ಈ ವೇಳೆ ಭಾರತ ತಂಡದ ಧ್ವಜಧಾರಿಗಳಾಗಿದ್ದ ಪಿ.ವಿ. ಸಿಂಧು ಮತ್ತು ಶರತ್ ಕಮಲ್ ಅವರು ತ್ರಿವರ್ಣ ಧ್ವಜ ಹಿಡಿದುಕೊಂಡು ದೋಣಿಯ ಮೂಲಕ ಇತರೆ ಕ್ರೀಡಾಪಟುಗಳೊಂದಿಗೆ ಸಾಗಿದರು. ಮೂರು ಬಾರಿಯ ಜೂಡೋ ಚಾಂಪಿಯನ್ ಟೆಡ್ಡಿ ರೈನರ್ ಅವರು ಒಲಿಂಪಿಕ್ ಜ್ಯೋತಿಯನ್ನು ಬೆಳಗಿಸಿದರು.  ಸುಮಾರು ೫೦೦ಕ್ಕೂ ಹೆಚ್ಚು ನೃತ್ಯಗಾರರು ಪಾಂಟ್ ನೋಟ್ರೆ ಡ್ಯಾಮ್ ಮತ್ತು ಪ್ಯಾರಿಸ್ ಸಿಟಿ ಹಾಲ್‌ನಲ್ಲಿ ಪ್ರದರ್ಶನ ನೀಡಿದರು. ಫ್ರಾನ್ಸ್‌ನ ಶ್ರೇಷ್ಠ ಪಾಪ್ ಸ್ಟಾರ್ ಅಯಾ ನಕಮುರ, ಅಮೆರಿಕದ ಗಾಯಕಿ ಲೆಡಿ ಗಾಗ ಅವರ ಸಂಗೀತ ಸುಧೆ ಪ್ರೇಕ್ಷಕರಿಗೆ ಮನರಂಜನೆ ನೀಡಿತು. ಫ್ರಾನ್ಸ್‌ನ ಶತ ಶತಮಾನಗಳ ಇತಿಹಾಸ, ಸಾಂಸ್ಕೃತಿಕ ಪರಂಪರೆಯನ್ನು ಒಡಮೂಡಿಸಿದ ಪ್ಯಾರಿಸ್ ಒಲಿಂಪಿಕ್ಸ್‌ನ ಉದ್ಘಾಟನಾ ಸಮಾರಂಭ ಮಳೆಯ ನಡುವೆಯೂ ಕೋಟ್ಯಂತರ ಮಂದಿಯನ್ನು ರೋಮಾಂಚಿತರನ್ನಾಗಿಸಿತು. ಒಲಿಂಪಿಕ್ಸ್ ಇತಿಹಾಸದಲ್ಲಿಯೇ ಪ್ರಥಮ ಬಾರಿಗೆ ಕ್ರೀಡಾಂಗಣದ ಹೊರಗೆ ಅದರಲ್ಲೂ ನದಿಯ ಮೇಲೆ ಉದ್ಘಾಟನೆ ಜರುಗಿದ್ದು ಮಹಾಕೂಟದ ಕಳೆ ಇನ್ನಷ್ಟು ಹೆಚ್ಚಿತು. ನದಿಯ ಎರಡೂ ಬದಿಯಲ್ಲಿ ಸಜ್ಜುಗೊಂಡಿದ್ದ ಭವ್ಯ ವೇದಿಕೆಯಲ್ಲಿ ನೆರೆದಿದ್ದ ಕ್ರೀಡಾಪ್ರೇಮಿಗಳ ಸಂಭ್ರಮ ಮುಗಿಲು ಮುಟ್ಟಿತ್ತು.     ವೇದಿಕೆಯ ಒಂದು ಬದಿಯಲ್ಲಿ ಪಾಶ್ಚಾತ್ಯ ಸಂಗೀತ,

ಶಾಸ್ತ್ರೀಯ ಸಂಗೀತ ಮತ್ತು ಓಪೆರಾ ನಾದ, ಕಲಾವಿದರ ಪ್ರದರ್ಶನ ಉದ್ಘಾಟನೆಯ ಸಮಾರಂಭದ ಮೆರುಗನ್ನು ದ್ವಿಗುಣಗೊಳಿಸಿತು.

******

ಪ್ಯಾರಿಸ್ ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿಂದು ಭಾರತ ತಂಡ ಹಲವು ಸ್ಪರ್ಧೆಗಳಲ್ಲಿ ಭಾಗವಹಿಸಲಿದೆ. ಬ್ಯಾಡ್ಮಿಂಟನ್ ಸ್ಪರ್ಧೆಯ ಪುರುಷರ ಸಿಂಗಲ್ಸ್ ವಿಭಾಗದಲ್ಲಿಭಾರತದ ಭರವಸೆಯ ಶೆಟ್ಲರ್ ಲಕ್ಷ್ಯ ಸೇನ್ ಅವರು ಕೆವಿನ್ ಕಾರ್ಡನ್ ಸವಾಲು ಎದುರಿಲಿಸಲಿದ್ದಾರೆ. ಪುರುಷರ ಡಬಲ್ಸ್ ವಿಭಾಗದಲ್ಲಿ ಚಿನ್ನದ ಪದಕದ ಆಸೆ ಹೆಚ್ಚಿಸಿರುವ ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಜೋಡಿ ಫ್ರಾನ್ಸ್‌ನ ಲೂಕಾಸ್ ಕಾವೀರ್ ಮತ್ತು ರೋನಾನ್ ಲೇಬರ್ ವಿರುದ್ಧ ತಮ್ಮ ಅಭಿಯಾನ ಆರಂಭಿಸಲಿದ್ದಾರೆ. ಕಳೆದ ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಕಂಚಿನ ಪದಕ ಗೆದ್ದಿರುವ ಭಾರತದ ಪುರುಷರ ಹಾಕಿ ತಂಡ ಇಂದು ಸಂಜೆ 'ಬಿ' ಗುಂಪಿನ ತನ್ನ ಮೊದಲ ಪಂದ್ಯದಲ್ಲಿನ್ಯೂಜಿಲೆಂಡ್ ತಂಡವನ್ನು ಎದುರಿಸಲಿದೆ. ಈ ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯ಕ್ಕೆ ನಡೆಯಲಿದೆ. ಅದೇ ರೀತಿ ಶೂಟಿಂಗ್ ಸ್ಪರ್ಧೆಯಲ್ಲಿ ಸಂದೀಪ್ ಸಿಂಗ್, ಅರ್ಜುನ್ ಬಬುತಾ, ಎಲಾವೆನಿಲ್ ವಲಾರಿವನ್, ರಮಿತಾ ಜಿಂದಾಲ್, ಸರಬ್ಜೋತ್ ಸಿಂಗ್, ಅರ್ಜುನ್ ಚೀಮಾ, ರಿಧಮ್ ಸಾಂಗ್ವಾನ್, ಮನು ಭಾಕರ್ ಬೇರೆ ಬೇರೆ ವಿಭಾಗಗಳಲ್ಲಿ ಸೆಣಸಲಿದ್ದಾರೆ. ಇನ್ನು ಟೆನಿಸ್ ಸ್ಪರ್ಧೆಯಲ್ಲಿ ಕರ್ನಾಟಕ ಮೂಲದ ರೋಹನ್ ಬೋಪಣ್ಣ ಅವರು ಶ್ರೀರಾಮ್ ಬಾಲಾಜಿ ಜೊತೆಗೂಡಿ ಡಬಲ್ಸ್ ವಿಭಾಗದ ಸಿಂಗಲ್ಸ್ ಮೊದಲ ಸುತ್ತಿನಲ್ಲಿ ಫ್ರಾನ್ಸ್‌ನ ಅಡ್ವರ್ಡ್ ರೋಜರ್ ಮತ್ತು ಫ್ಯಾಬಿಯನ್ ರೆಬೌಲ್ ಜೋಡಿಯನ್ನು ಎದುರಿಸಲಿದ್ದಾರೆ. ಟೇಬಲ್ ಟೆನಿಸ್‌ನಲ್ಲಿ ಹರ್ಮೀತ್ ದೇಸಾಯಿ ಹಾಗೂ ಮಹಿಳೆಯರ ಬಾಕ್ಸಿಂಗ್‌ನಲ್ಲಿಪ್ರೀತಿ ಪವಾರ್, ಮತ್ತು ರೋಯಿಂಗ್‌ನಲ್ಲಿ ಬಾಲರಾಜ್ ಪನ್ವಾರ್ ಸ್ಪರ್ಧೆಗಿಳಿಯಲಿದ್ದಾರೆ.

******

ನವದೆಹಲಿಯಲ್ಲಿ ರಾಷ್ಟ್ರಪತಿ ಭವನದ ಸಾಂಸ್ಕೃತಿಕ ಕೇಂದ್ರದಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನೀತಿ ಆಯೋಗದ ಆಡಳಿತ ಮಂಡಳಿಯ ೯ನೇ ಸಭೆ ನಡೆಯಲಿದೆ. ವಿಕಸಿತ ಭಾರತ@೨೦೪೭ ಎಂಬುದು ಈ ವರ್ಷದ ಘೋಷವಾಕ್ಯವಾಗಿದೆ. ಭಾರತವನ್ನು ಅಭಿವೃದ್ಧಿ ಹೊಂದಿದ ರಾಷ್ಟ್ರವನ್ನಾಗಿ ಮಾಡುವ ಗುರಿಯ ಮೇಲೆ ಕೇಂದ್ರೀಕೃತವಾಗಿದೆ. ವಿಕಸಿತ ಭಾರತದ ದೃಷ್ಟಿಕೋನದ ಕುರಿತು ಈ ಸಭೆಯಲ್ಲಿ ಚರ್ಚಿಸಲಾಗುತ್ತದೆ. ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ನಡುವೆ ಸಮನ್ವಯತೆ ಸಾಧಿಸುವುದು, ಆಡಳಿತದ ಪಾಲ್ಗೊಳ್ಳುವಿಕೆ ಹಾಗೂ ಗ್ರಾಮೀಣ ಮತ್ತು ನಗರ ಪ್ರದೇಶದ ಜನರ ಜೀವನಮಟ್ಟ ಉತ್ತಮಗೊಳಿಸಲು ಕಾರ್ಯಕ್ರಮಗಳನ್ನು ಜಾರಿಗೆ ತರುವುದು ಆಡಳಿತ ಮಂಡಳಿ ಸಭೆಯ ಉದ್ದೇಶವಾಗಿದೆ ಎಂದು ನೀತಿ ಆಯೋಗ ತಿಳಿಸಿದೆ. ಮುಖ್ಯಮಂತ್ರಿಗಳು ಮತ್ತು ಲೆಫ್ಟಿನೆಂಟ್ ಗವರ್ನರ್‌ಗಳು, ಕೇಂದ್ರ ಸಚಿವರು ಈ ಸಭೆಯಲ್ಲಿ ಭಾಗವಹಿಸಲಿದ್ದಾರೆ.

******

ಲಾವೋ ಪಿಡಿಆರ್ ರಾಜಧಾನಿ ವಿಯೆಂಟಿನಾ ಪ್ರವಾಸದಲ್ಲಿರುವ ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್. ಜೈಶಂಕರ್ ಅವರು ದಕ್ಷಿಣ ಕೊರಿಯಾ, ಸಿಂಗಾಪುರ, ಇಂಡೋನೇಷಿಯಾ ಮತ್ತು ಮಲೇಷಿಯಾದ ತಮ್ಮ ಸಹವರ್ತಿಗಳನ್ನು ಭೇಟಿಯಾಗಿ, ಮಾತುಕತೆ ನಡೆಸಿದರು. ಆಸಿಯಾನ್ - ಭಾರತ ಪೂರ್ವ ಏಷ್ಯಾ ಶೃಂಗಸಭೆ ಮತ್ತು ಆಸಿಯಾನ್ ಪ್ರಾದೇಶಿಕ ವೇದಿಕೆಯ ಸ್ವರೂಪದಲ್ಲಿ ಆಸಿಯಾನ್ ಚೌಕಟ್ಟಿನ ಅಡಿಯಲ್ಲಿ ನಡೆಯಲಿರುವ ವಿದೇಶಾಂಗ ಸಚಿವರುಗಳ ಸಭೆಯಲ್ಲಿ ಪಾಲ್ಗೊಳ್ಳಲು ಎಸ್. ಜೈಶಂಕರ್

ಅವರು ಏಯೆಂಟಿನಾ ಪ್ರವಾಸ ಕೈಗೊಂಡಿದ್ದಾರೆ. ಭಾರತ-ಸಿಂಗಾಪುರ ದ್ವಿಪಕ್ಷೀಯ ಒಪ್ಪಂದದ ಹೊಸ ಕಾರ್ಯತಂತ್ರದ ಕುರಿತು ಅವರು ಸಿಂಗಾಪುರದ ವಿದೇಶಾಂಗ ಸಚಿವರೊಂದಿಗೆ ಮಾತುಕತೆ ನಡೆಸಿದರು. ವಿವಿಧ ದೇಶಗಳ ವಿದೇಶಾಂಗ ಸಚಿವರೊಂದಿಗೆ ಡಾ. ಎಸ್. ಜೈಶಂಕರ್ ಅವರು ಪರಸ್ಪರ ಬಾಂಧವ್ಯ ವೃದ್ಧಿ, ಸಹಕಾರ, ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳಿಗೆ ಸಂಬಂಧಿಸಿದಂತೆ ಏರ್ಪಟ್ಟಿರುವ ಒಪ್ಪಂದ ಹಾಗೂ ಇನ್ನಿತರೆ ಅಭಿವೃದ್ಧಿ ವಿಷಯಗಳ ಕುರಿತು ಚರ್ಚೆ ನಡೆಸಿದರು. ಭಾರತ ಯೂರೋಪಿಯನ್ ಒಕ್ಕೂಟದ ನಡುವೆ ವ್ಯಾಪಾರ, ಶುದ್ಧ ಇಂಧನ, ಆಧುನಿಕ ತಂತ್ರಜ್ಞಾನದ ಕುರಿತು ಅವರು ಮಾತುಕತೆ ನಡೆಸಿದರು.

******

ರಾಷ್ಟ್ರಪತಿ ಹಾಗೂ ಮಾಜಿ ರಾಷ್ಟ್ರಪತಿಗಳಿಗೆ ಸಂದಿರುವ ಆಯ್ದ ಉಡುಗೊರೆ ಮತ್ತು ಇನ್ನಿತರೆ ವಸ್ತುಗಳನ್ನು ಇ-ಉಪಹಾರ ಹೆಸರಿನ ಆನ್‌ಲೈನ್ ಪೋರ್ಟಲ್ ಮೂಲಕ ರಾಷ್ಟ್ರಪತಿ ಭವನವು ಹರಾಜು ನಡೆಸಲಿದೆ. ರಾಷ್ಟ್ರಪತಿ ದ್ರೌಪದಿ ಮುರ್ಮು ತಮ್ಮ ಅಧಿಕಾರಾವಧಿಯ ಎರಡು ವರ್ಷ ಪೂರ್ಣಗೊಂಡ ಬಳಿಕ ಈ ಪೋರ್ಟಲ್‌ಗೆ ಚಾಲನೆ ನೀಡಿದ್ದಾರೆ. ಮೊದಲ ಹಂತದಲ್ಲಿ ಸುಮಾರು ೨೫೦ ಅಂದವಾದ ಉಡುಗೊರೆಗಳನ್ನು ಹರಾಜು ಹಾಕಲಾಗುತ್ತದೆ. ಇದಕ್ಕಾಗಿ ಬಿಡ್ ಪ್ರಕ್ರಿಯೆ ಮುಂದಿನ ತಿಂಗಳು ಆಗಸ್ಟ್ ೫ ರಿಂದ ೨೬ರ ವರೆಗೆ ತೆರೆದಿರಲಿದೆ. ಹರಾಜು ಪ್ರಕ್ರಿಯೆಯಲ್ಲಿ ಅತಿ ಹೆಚ್ಚು ಬಿಡ್ ದಾರರಿಗೆ ಈ ಉಡುಗೊರೆಗಳನ್ನು ನೀಡಲಾಗುತ್ತದೆ. ಆಸಕ್ತರು ಉಪಹಾರ್ ಡಾಟ್ ರಾಷ್ಟ್ರಪತಿಭವನ್ ಡಾಟ್ ಗೌ ಡಾಟ್ ಇನ್ ಪೋರ್ಟಲ್ ಮೂಲಕ ತಮ್ಮ ಬಿಡ್‌ಗಳನ್ನು ಸಲ್ಲಿಸಲು ಕೋರಲಾಗಿದೆ. ಈ ಹರಾಜು ಪ್ರಕ್ರಿಯೆಯಿಂದ ಬರುವ ಹಣವನ್ನು ಮಕ್ಕಳ ನೆರವಿಗಾಗಿ ದೇಣಿಗೆ ನೀಡಲಾಗುತ್ತದೆ. ಹರಾಜು ಆಗಲಿರುವ ಉಡುಗೊರೆಗಳನ್ನು ರಾಷ್ಟ್ರಪತಿ ಭವನದ ವಸ್ತು ಸಂಗ್ರಹಾಲಯದಲ್ಲಿ ಸಾರ್ವಜನಿಕರ ವೀಕ್ಷಣೆಗೆ ಇರಿಸಲಾಗಿದೆ.

******

ಭಾರತ ಮತ್ತು ಅಮೆರಿಕ ದೇಶಗಳು ಸಾಂಸ್ಕೃತಿಕ ಆಸ್ತಿ ಒಪ್ಪಂದಕ್ಕೆ ಸಹಿ ಹಾಕಿವೆ. ಈ ಒಪ್ಪಂದದ ಅಡಿಯಲ್ಲಿ ಪುರಾತತ್ವ ಮತ್ತು ಜನಾಂಗೀಯ ವಸ್ತುಗಳ ಅಕ್ರಮ ವ್ಯಾಪಾರ, ಆಮದು, ರಫ್ತು ಮತ್ತು ಕಳ್ಳ ಸಾಗಾಣಿಕೆಯನ್ನು ನಿಯಂತ್ರಿಸುವುದು ಈ ಒಪ್ಪಂದದ ಉದ್ದೇಶವಾಗಿದೆ. ಕಳವು ಮಾಡಲಾದ ಭಾರತೀಯ ಕಲಾಕೃತಿಗಳನ್ನು ಅಮೆರಿಕದಿಂದ ಸ್ವದೇಶಕ್ಕೆ ಹಿಂತಿರುಗಿಸುವುದು ಈ ಒಪ್ಪಂದದ ಭಾಗವಾಗಿದೆ. ಭಾರತ, ಅಮೆರಿಕದ ಜತೆ ಸಾಂಸ್ಕೃತಿಕ ಆಸ್ತಿ ಒಪ್ಪಂದ ಮಾಡಿಕೊಂಡಿರುವುದು ಇದೇ ಮೊದಲು. ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಮಾತನಾಡಿರುವ ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವ ಗಜೇಂದ್ರ ಸಿಂಗ್ ಶೆಖಾವತ್, ಇದೊಂದು ಐತಿಹಾಸಿಕ ಒಪ್ಪಂದವಾಗಿದೆ. ಎರಡೂ ದೇಶಗಳ ನಡುವಿನ ಪಾಲುದಾರಿಕೆ ಬಲವರ್ಧನೆಗೆ ಇದು ಸಹಕಾರಿಯಾಗಲಿದೆ. ಪ್ರಮುಖವಾಗಿ ಅಂತರ್ ಸಾಂಸ್ಕೃತಿಕ ಬೆಳವಣಿಗೆಯನ್ನು ಉತ್ತೇಜಿಸುತ್ತದೆ ಎಂದು ಹೇಳಿದ್ದಾರೆ. ಈ ಮಧ್ಯೆ, ಭಾರತದಲ್ಲಿನ ಅಮೆರಿಕದ ರಾಯಭಾರಿ ಎರಿಕ್ ಗಾರ್ಸೆಟಿ ಮಾತನಾಡಿ, ಭಾರತದೊಂದಿಗೆ ಅದರಲ್ಲೂ ವಿಶೇಷವಾಗಿ ಸಾಂಸ್ಕೃತಿಕ ರಾಜತಾಂತ್ರಿಕತೆಯ ಮೂಲಕ ತನ್ನ ಪಾಲುದಾರಿಕೆಯನ್ನು ಬಲಪಡಿಸುವ ನಿಟ್ಟಿನಲ್ಲಿ ಅಮೆರಿಕ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

******

ಭಾರತ ಮತ್ತು ಆತಿಥೇಯ ಶ್ರೀಲಂಕಾ ತಂಡಗಳ ನಡುವೆ ಇಂದಿನಿಂದ ಮೂರು ಪಂದ್ಯಗಳ ಟಿ-೨೦ ಕ್ರಿಕೆಟ್ ಸರಣಿ ಆರಂಭವಾಗಲಿದೆ. ಪಲ್ಲೆಕೆಲೆ ಅಂತಾರಾಷ್ಟ್ರೀಯ ಕ್ರಿಕೆಟ್ ಮೈದಾನದಲ್ಲಿ ಇಂದು ಸಂಜೆ ೭ ಗಂಟೆಗೆ

ಮೊದಲ ಪಂದ್ಯ ನಡೆಯಲಿದೆ. ಹೊಸ ಕೋಚ್ ಗೌತಮ್ ಗಂಭೀರ್ ಮತ್ತು ನೂತನ ನಾಯಕ ಸೂರ್ಯ ಕುಮಾರ್ ಯಾದವ್ ಅವರಿಗೆ ಈ ಸರಣಿ ತಮ್ಮ ಸಾಮರ್ಥ್ಯ ತೋರಲು ಉತ್ತಮ ಅವಕಾಶವಾಗಿದೆ. ಮತ್ತೊಂದೆಡೆ ಚರಿತಾ ಅಸಲಂಕ ನಾಯಕತ್ವದಲ್ಲಿರುವ ಶ್ರೀಲಂಕಾ ತಂಡ ಸ್ವದೇಶದಲ್ಲಿ ಉತ್ತಮ ಪ್ರದರ್ಶನ ನೀಡುವ ವಿಶ್ವಾಸದಲ್ಲಿದೆ.

******

ದೇಶದ ಹಲವು ರಾಜ್ಯಗಳಲ್ಲಿ ಮುಂದಿನ ಮೂರು ದಿನಗಳ ಕಾಲ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಧ್ಯಪ್ರದೇಶ, ಮಧ್ಯ ಮಹಾರಾಷ್ಟ್ರ, ಹರಿಯಾಣ, ಚತ್ತೀಸ್‌ಗಢ, ವಿದರ್ಭ, ಕೊಂಕಣ, ಗೋವಾ, ಗುಜರಾತ್, ಸೌರಾಷ್ಟ್ರ, ಉತ್ತರಾಖಂಡ, ರಾಜಸ್ಥಾನ, ಹಿಮಾಚಲಪ್ರದೇಶ, ಕೇರಳ, ಉತ್ತರ ಪ್ರದೇಶ, ಜಮ್ಮು-ಕಾಶ್ಮೀರ ಮತ್ತಿತರ ಪ್ರದೇಶಗಳಲ್ಲಿ ಬರುವ ಸೋಮವಾರದ ವರೆಗೆ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹೇಳಲಾಗಿದೆ. ಕರ್ನಾಟಕ ರಾಜ್ಯದ ಹಲವು ಜಿಲ್ಲೆಗಳಲ್ಲಿ ಧಾರಾಕಾರ ಮಳೆ ಮುಂದುವರಿದಿದೆ. ಕರಾವಳಿ, ದಕ್ಷಿಣ ಹಾಗೂ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ನಿರಂತರ ಮಳೆಯಾಗುತ್ತಿರುವ ಕಾರಣ ಕೆಲವೆಡೆ ಪ್ರವಾಹ ಪರಿಸ್ಥಿತಿ ಉಂಟಾಗಿದೆ. ರೈಲು ಮತ್ತು ರಸ್ತೆ ಸಂಚಾರದಲ್ಲೂ ವ್ಯತ್ಯಯವಾಗಿದೆ. ಹಾಸನ ಜಿಲ್ಲೆಯ ಮಲೆನಾಡು ಭಾಗದಲ್ಲಿ ಭಾರಿ ಮಳೆಯಾಗುತ್ತಿದ್ದು ಮಕ್ಕಳ ಸುರಕ್ಷತಾ ದೃಷ್ಟಿಯಿಂದ ಸಕಲೇಶಪುರ ಹಾಗೂ ಬೇಲೂರು ತಾಲೂಕುಗಳ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಶನಿವಾರ ರಜೆ ಘೋಷಿಸಲಾಗಿದೆ.

******